**ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ**

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE : 25/9/2020

# ಸರ್ಕಾರದ ವಿರುದ್ಧ ಅವಿಶ್ವಾಸಾಸ್ತ್ರ

ದಿ. ವಾ. 25-9-2020

## ನಿರ್ಣಯ ಸೋಲಿಸಲು ಯಡಿಯೂರಪ್ಪ ಕಾರ್ಯತಂತ್ರ





ಬೆಂಗಳೂರು: ಮಹತ್ವದ ಬೆಳವಣಿಗೆಯಲ್ಲಿ ಪ್ರತಿಪಕ್ಷ ಕಾಂಗ್ರೆಸ್ ಗುರುವಾರ ವಿಧಾನಸಭೆಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ಅವಿಶ್ವಾಸದ ಅಸ್ತ್ರ ಪ್ರಯೋಗಿಸಿದೆ. ಕರೊನಾ ಉಪಕರಣ, ಪರಿಕರ ಖರೀದಿಯಲ್ಲಿ ನಡೆದಿದೆ ಎನ್ನಲಾದ ಹಗರಣವನ್ನು ನ್ಯಾಯಾಂಗ ತನಿಖೆಗೆ ವಹಿಸಬೇಕೆಂಬ ಬೇಡಿಕೆಯನ್ನು ಸರ್ಕಾರ ತಿರಸ್ಕರಿಸಿದ ಬೆನ್ನಲ್ಲೇ ಕಾಂಗ್ರೆಸ್ ಅವಿಶ್ವಾಸ ನಿರ್ಣಯ ಮಂಡಿಸಿರುವುದು ಸಂಚಲನ ಮೂಡಿಸಿದೆ. ಕೈಪಡೆಯ ಈ ತಂತ್ರಕ್ಕೆ ತಿರುಗೇಟು ನೀಡಲು ಕಾರ್ಯತಂತ್ರ ಹೆಣೆಯಲು ಮುಂದಾಗಿರುವ ಸಿಎಂ ಯಡಿಯೂರಪ್ಪ, ತಮ್ಮ ಆತ್ಮೀಯರು ಹಾಗೂ ಅಧಿಕಾರಿಗಳ ಜತೆ ಚರ್ಚೆ ನಡೆಸಿದ್ದಾರೆ. ಯಡಿಯೂರಪ್ಪ ಮಂತ್ರಿಮಂಡಲದ ಮೇಲೆ ವಿಶ್ವಾಸವಿಲ್ಲ, ನಮಗೆ ಅವಿಶ್ವಾಸ ನಿರ್ಣಯ ಮಂಡನೆಗೆ ಅವಕಾಶ ಕೊಡಿ ಎಂದು ಸಿದ್ದರಾಮಯ್ಯ ಮನವಿ ಮಾಡಿದರು. ಅವಿಶ್ವಾಸ ನಿರ್ಣಯ ಚರ್ಚೆಗೆ ಅವಕಾಶ ಕೊಡುತ್ತೇನೆ. ಯಾವಾಗ? ಎಷ್ಟು ಗಂಟೆಗೆ ಎಂಬುದನ್ನು ಚರ್ಚಿಸಿದ ಬಳಿಕ ನಿರ್ಧರಿಸುವುದಾಗಿ ಸ್ಪೀಕರ್ ಭರವಸೆ ನೀಡಿದರು.

ವಿವರ ಪುಟ 9

### ಏನಾಗಬಹುದು?

- ಅವಿಶ್ವಾಸ ನಿರ್ಣಯ ಗೆಲ್ಲುವಷ್ಟು ಸಂಖ್ಯೆಯಿಲ್ಲ ಎಂಬುದು ಕಾಂಗ್ರೆಸ್‌ಗೂ ತಿಳಿದಿದೆ.
- ಸದನದ ಕಲಾಪದಲ್ಲಿ ಅವಿಶ್ವಾಸ ನಿರ್ಣಯ ದಾಖಲಾಗುವಂತೆ ಮಾಡಿ ಬಿಎಸ್‌ವೈ ಸರ್ಕಾರವನ್ನು ಮುಜುಗರಕ್ಕೀಡು ಮಾಡಿಸುವುದಷ್ಟೇ ಕೈಪಡೆಯ ಉದ್ದೇಶ
- ಜೆಡಿಎಸ್ ತಟಸ್ಥವಾಗಿರುವುದರಿಂದ ಸರ್ಕಾರಕ್ಕೆ ಯಾವುದೇ ಅಪಾಯವಿಲ್ಲ